**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.</u>**

**<u>ಸಿ.ಸಿ.ನಂ.410/2020</u>**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಮುನಿನರಸಪ್ಪ** | | |
| **ಗಂಡಃತಂದೆಃಹೆಸರು** | **ಗಾರೇ ಮುನಿಯಪ್ಪ** | **ಪಿಡಬ್ಲೂಃ** | **1** |
| **ವಯಸ್ಸು** | **50 ವರ್ಷ** | **ಸಿಡಬ್ಲೂಃ** | **1** |
| **ಉದ್ಯೋಗಃ** | **ಕೂಲಿ ಕೆಲಸ** | | |
| **ವಾಸ ಸ್ಥಳಃ** | **ದೊಡ್ಡಕೊಂಡ್ರಹಳ್ಳಿ ಗ್ರಾಮ** | | |

**<u>ದಿನಾಂಕ 26-05-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-</u>**

ಚಾ.ಸಾ.2 ನನ್ನ ಭಾವ. ಚಾ.ಸಾ.3 ನನಗೆ ಗೊತ್ತು. ಆರೋಪಿಗಳು ನನ್ನ ಸಂಬಂಧಿಕರಾಗಬೇಕು. ಆರೋಪಿತರು ನನ್ನ ಅಣ್ಣನ ಮಕ್ಕಳು. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಮತ್ತು ಆರೋಪಿತರ ನಡುವೆ ಗಲಾಟೆ ನಡೆದಿಲ್ಲ. ಆರೋಪಿತರು ಕಲ್ಲಿನಿಂದ ಮತ್ತು ಕೈಗಳಿಂದ ಹೊಡೆದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಪ್ರಾಣಬೆದರಿಕೆಯನ್ನು ಹಾಕಿಲ್ಲ. ನಾನು ಜಮೀನಿನಲ್ಲಿ ಕೆಲಸ ಮಾಡುವಾಗ ಆಯಾ ತಪ್ಪಿ ಬಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಂತಾಮಣಿ ಪೋಲೀಸರು ಬಂದು ಕೆಲವು ದಾಖಲೆಗಳನ್ನು ಸಹಿಯನ್ನು ಪಡೆದಿರುತ್ತಾರೆ.

ಪೋಲಿಸರಿಗೆ ಯಾವುದೇ ದೂರನ್ನು ಕೊಟ್ಟಿಲ್ಲ. ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ದೂರನ್ನು ನಿ.ಪಿ.1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ಪಂಚನಾಮೆಯನ್ನು ನಿ.ಪಿ.2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.2(ಎ) ಎಂದು ಗುರುತಿಸಲಾಯಿತು. ನಿ.ಪಿ.1 ಮತ್ತು ನಿ.ಪಿ.2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನ್ಯಾಯಾಲಯದ ಮುಂದಿರುವ ಕಲ್ಲನ್ನು ನೋಡಿದರೆ ಗುರುತಿಸಲಾಗುವುದಿಲ್ಲ

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ–**

ದಿಃ 02–01–2019 ರಂದು ಸಂಜೆ 4.30 ಗಂಟೆ ಸಮಯದಲ್ಲಿ ನಾನಾು ನಮ್ಮ ಖಾಲಿ ನಿವೇಶನದ ಬಳಿ ಹುಲು ಮೇದೆ ಹಾಕಲು ಮರಗಳನ್ನು ಹಾಕುತ್ತಿದ್ದಾಗ 1 ನೇ ಆರೋಪಿ ನನ್ನ ಮೇಲೆ ಜಗಳ ತೆಗೆದು ಈ ನಿವೇಶನ ನನಗೆ ಸೇರಿದ್ದು ನಿನಗೇನು ಕೆಲಸ ಎಂದು ಅವಾಶ್ಯ ಶಬ್ಧಗಳಿಂದ ಬೈದರು ಎಂದರೆ ಸರಿಯಲ್ಲ. ಅಲ್ಲೆ ಇದ್ದ ಕಲ್ಲಿನಿಂದ ನನ್ನ ತಲೆಗೆ ಹೊಡೆದು ರಕ್ತಗಾಯ ಪಡಿಸಿದರು ಎಂದರೆ ಸರಿಯಲ್ಲ. ಅಷ್ಟರಲ್ಲಿ 2 ರಿಂದ 4 ನೇ ಆರೋಪಿತರು ಬಂದು ನನ್ನ ಮೇಲೆ ಜಗಳ ತೆಗೆದು ಮೈ ಕೈ ಬೆನ್ನಿಗೆ ಹೊಡೆದರು ಎಂದರೆ ಸರಿಯಲ್ಲ. ಆರೋಪಿತರು ನನಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ.

**ಸಿಡಬ್ಲೂಃ 1**

ದಿನಾಂಕಃ 03-01-2020 ರಂದು ಪೋಲಿಸರು ದೊಡ್ಡಕೊಂಡ್ರಹಳ್ಳಿ ಗ್ರಾಮ ನಮ್ಮ ಮನೆಯ ಮುಂಭಾಗದಲ್ಲಿ ಅಂದರೆ ಕೃತ್ಯ ನಡೆದ ಸ್ಥಳದಲ್ಲಿ ನನ್ನ ಮತ್ತು ಚಾಸಾ 4 ಮತ್ತು 5 ರವರ ಸಮಕ್ಷಮ ಪಂಚನಾಮೆಯನ್ನು ಬೆಳಗ್ಗೆ 9.00 ರಿಂದ 10.00 ಗಂಟೆವರೆಗೂ ಮಹಜರ್ ಬರೆದು ಒಂದು ಕಲ್ಲನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.

ನಿಪಿ 1 ರಿಂದ 2 ರ ಸಂಗತಿಗಳು ಗೊತ್ತಿದ್ದರು ನಾನು ಜಮೀನಿನಲ್ಲಿ ಬಿದ್ದು ಚಿಕಿತ್ಸೆ ಪಡೆದಿದ್ದೆ ಎಂದು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದಕೋಸ್ಕರ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ ಶ್ರೀ.ಆರ್.ಎಸ್. ಎಸ್. ಆರೋಪಿ ಪರ ವಕೀಲರಿಂದಃ- ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.